# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 292 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–06–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 292 | Title- Code: KARKAN 28269 | Chitradurga | Date: 12-06-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಶಿಕ್ಷಣಕ್ಕೆ ಬಡತನ, ಸಿರಿತನ ತಾರತಮ್ಯವಿಲ್ಲ: ರವಿಕುಮಾರ್ 2

ಜಿಲ್ಲೆಯಲ್ಲಿ ಚುರುಕುಗೊಂಡ ಕೃಷಿ ಚಟುವಟಿಕೆ 3

ಯುವ ಶಕ್ತಿಯ ಅಂತಃಸತ್ವಕ್ಕೆ ಕೊಳ್ಳಿಯಿಡುತ್ತಿರುವ ಅಪಾಯಕಾರಿ ಆಟ 4



ಸುದ್ದಿ, ಜಾಹಿರಾತಿಗೆ
9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ದರ್ಶನ್ ಅಭಿಮಾನಿ ಚಿತ್ರದುರ್ಗದ ರೇಣುಕಾಸ್ವಾಮಿ ಬೆಂಗ್ಳೂರಲ್ಲಿ ಮರ್ಡರ್

## ಮಧ್ಯಾಹ್ನ ಊಟ ಬೇಡ ಎಂದು ತೆರಳಿದ್ದ ರೇಣುಕಾಸ್ವಾಮಿ ಮರಳಿ ಬಂದಿದ್ದು ಶವವಾಗಿ

» ನಮ್ಮಜನ ಸಮಾಚಾರ

ಚಿತ್ರದುರ್ಗ:ನಗರದಬ್ಯಾಂಕ್‌ಕಾಲೋನಿಯ ನಿವಾಸಿಗಳಾದ ಕೆಇಬಿ ನಿವೃತ್ತ ನೌಕರರಾದ ಶಿವಾನಂದ ಗೌಡ್ರು ಹಾಗೂ ರತ್ನಪ್ರಭ ಪುತ್ರ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಚಿತ್ರನಟ ದರ್ಶನ್ ಅರೆಸ್ಟ್ ಆಗಿದ್ದಾರೆ.

ಕಳೆದಎರಡುದಿನಗಳಿಂದಕೆಲಸಕ್ಕೆಹೋದ ಮಗ ಮನೆಗೆ ವಾಪಸ್ ಬಂದಿರಲಿಲ್ಲ. ರಾತ್ರಿ ಊಟಕ್ಕೆ ಸಹ ಬರುವುದಿಲ್ಲ ಎಂದು ತಾಯಿ ಬಳಿ ಹೇಳಿ ಹೋಗಿದ್ದ ರೇಣುಕಾಸ್ವಾಮಿ ಕೊಲೆಯಾಗಿದ್ದಾನೆ.

ಕೊಲೆಯಾದ ರೇಣುಕಾಸ್ವಾಮಿ ಒಂದು ವರ್ಷದ ಹಿಂದಷ್ಟೇ ಮದುವೆ ಆಗಿದ್ದರು. ಪತ್ನಿ ಐದು ತಿಂಗಳ ಗರ್ಭಿಣಿ. ಪತಿಯ ಕೊಲೆ ಮಾಹಿತಿ ಆಕೆಗೆ ತಿಳಿಸಿಲ್ಲ. ಶನಿವಾರ ಬೆಳಗ್ಗೆ ಚಿತ್ರದುರ್ಗದ ಮನೆಯಿಂದ ತೆರಳಿದ್ದರು.ಮೂರ್ನಾಲ್ಕು ವರ್ಷದಿಂದ ಅಪೊಲೊ ಮೆಡಿಕಲ್ ಶಾಪ್ ನಲ್ಲಿ ಕೆಲಸ ಮಾಡಿಕೊಂಡಿದ್ದರು. ಚಳ್ಳಕೆರೆ ಗೇಟ್ ಬಳಿಯಿರುವ ಬಾಲಾಜಿ ಬಾರ್ ಬಳಿ ರೇಣುಕಾಸ್ವಾಮಿ ಬೈಕ್ ಪತ್ತೆಯಾಗಿತ್ತು.ನಿನ್ನೆ ಮಧ್ಯಾಹ್ನ ಬೆಂಗಳೂರಿನ ಕಾಮಾಕ್ಷಿ ಪಾಳ್ಯ ಪೊಲೀಸ್ ಠಾಣೆಯಿಂದ ಪೋಷಕರಿಗೆ ಫೋನ್ ಮಾಡಿ ಕರೆಸಿಕೊಂಡಿದ್ದಾರೆ.

**ರೇಣುಕಾಸ್ವಾಮಿ ಕೊಲೆ ವ್ಯಕ್ತಿ ಕೊಲೆಯಲ್ಲ, ಇದು ಮಾನವೀಯತೆ ಮನುಷ್ಯತ್ವದ ಕೊಲೆ: ಎಸ್.ಕೆ.ಬಸವರಾಜನ್** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ದರ್ಶನ್ ಅರೆಸ್ಟ್ ಆಗಿದ್ದು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿತ್ರದುರ್ಗದಲ್ಲಿ ಮಾಜಿ ಶಾಸಕ ಎಸ್.ಕೆ.ಬಸವರಾಜನ್ ಪ್ರತಿಕ್ರಿಯೆ ನೀಡಿದ್ದು ಅತ್ಯಂತ ಹೇಯ ಕೃತ್ಯ ದರ್ಶನ್ ಮತ್ತು ತಂಡ ಮಾಡಿದೆ. ಕೇವಲ ಒಂದು ಸಮಾಜದ ವ್ಯಕ್ತಿ ಕೊಲೆಯಲ್ಲ, ಮಾನವೀಯತೆ, ಮನುಷ್ಯತ್ವದ ಕೊಲೆಯಾಗಿದೆ. ಅವನು ತಪ್ಪು ಮಾಡಿದ್ರೆ ಶಿಕ್ಷೆ ನೀಡಲು ನ್ಯಾಯಾಲಯ ಇತ್ತು. ಕಾನೂನು ಕೈಗೆ ತೆಗೆದುಕೊಂಡ ಕೃತ್ಯ ಎಸಗಿದ್ದು ತಕ್ಕ ಶಿಕ್ಷೆ ಇವರಿಗೆ ಆಗಬೇಕಿದ್ದು ಪೊಲೀಸರು ತಕ್ಷಣ ದರ್ಶನ್ ಅವರನ್ನ ಅರೆಸ್ಟ್ ಮಾಡಿದ್ದಕ್ಕೆ ಧನ್ಯವಾದಗಳು ಅರ್ಪಿಸಿದ್ದು ನ್ಯಾಯಯುತ ತನಿಖೆ ಆಗಬೇಕು.ಅನ್ಯಾಯಕ್ಕೆ ಅವಕಾಶ ನೀಡಬಾರ್ದು.ನಟ ದರ್ಶನ್ ನೇರವಾಗಿ ಭಾಗಿಯಾಗಿದ್ದು, ದೊಡ್ಡ ಮಟ್ಟದಲ್ಲಿ ತನಿಖೆ ಆಗಬೇಕು, ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ಆಗಬೇಕಿದೆ ಹಾಗೂ ಸರ್ಕಾರ ವಿಶೇಷ ತಂಡ ರಚನೆ ಮಾಡಬೇಕು. ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ಆಗಬೇಕು ಜೊತೆಗೆ ನಾವು ಸಮಾಜದ ನೇತೃತ್ವದಲ್ಲಿ ನಾಳೆ ಪ್ರತಿಭಟನೆ ನಡೆಸಲಾಗುತ್ತದೆ ಎಂದರು.

**ಪ್ರಸಿದ್ಧ ನಟನಾಗಿ ಈ ವರ್ತನೆ ಸರಿಯಲ್ಲ: ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ** ರೇಣುಕಾಸ್ವಾಮಿ ಕೊಲೆ ಕೇಸ್ ಗೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿರುವ ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಅವರು ದಕ್ಷಿಣ ಭಾರತದಲ್ಲಿ ಪ್ರಸಿದ್ಧ ನಟನಾಗಿ ಈ ರೀತಿ ವರ್ತನೆ ಆಶ್ಚರ್ಯ ಆಯ್ತು. ಅನುಯಾಯಿಗಳ ಮೂಲಕ ಈತರ ಮಾಡಿದ್ದಾರೆ. ಕಾನೂನು ಪ್ರಕಾರ ಕ್ರಮ ಜರುಗಿಬೇಕಿತ್ತು. ಉತ್ತರ ಭಾರತದ ಕೃತ್ಯ ಎಸಗಿದ್ದಾರೆ. ಜನಪ್ರಿಯ ನಟ ದರ್ಶನ್ ಈ ರೀತಿ ಮಾಡಿದ್ದು ತಪ್ಪು, ರೇಣುಕಾಸ್ವಾಮಿ ಹುಡುಗ ಮದುವೆಯಾಗಿ ಒಂದು ವರ್ಷ ಆಗಿಲ್ಲ ಕೊಲೆ ಆಗಿರುವುದು ನೋವಿನ ಸಂಗತಿಯಾಗಿದ್ದು ತಕ್ಕ ಶಿಕ್ಷೆ ಆಗಬೇಕಿದೆ.

**ತನಿಖೆ ನಡೆಯುತ್ತಿದೆ:** ರೇಣುಕಾಸ್ವಾಮಿ ಕುಟುಂಬಸ್ಥರು ಶವ ನೋಡಿ ಗುರುತಿಸಿದ್ದಾರೆ. ಆ ನಂತರ ಮೂವರು ಪೊಲೀಸ್ ಠಾಣೆಗೆ ಬಂದು ರೇಣುಕಾಸ್ವಾಮಿ ಕೊಲೆ ಮಾಡಿರೋದಾಗಿ ಹೇಳಿಕೆ ನೀಡಿದ್ದರು. ಪೊಲೀಸರು ಈ ಪ್ರಕರಣದ ವಿಚಾರಣೆ ಮಾಡಿದಾಗ ದರ್ಶನ್ ಹೆಸರು ಕೇಳಿ ಬಂದಿತ್ತು. ದರ್ಶನ್ ಅವರ ಸೂಚನೆ ಮೇರೆಗೆ ರೇಣುಕಾಸ್ವಾಮಿ ಕೊಲೆ ಮಾಡಲಾಗಿದೆ ಎಂದು ಆರೋಪಿಗಳು ತಪ್ಪೊಪ್ಪಿಕೊಂಡಿದ್ದಾರೆ ಎಂಬ ಮಾತು ಕೇಳಿ ಬಂದಿದೆ. ಇನ್ನು ಪೊಲೀಸ್ ಕಮಿಷನರ್ ಬಿ ದಯಾನಂದ್ ಅವರು ಈ ಪ್ರಕರಣದಲ್ಲಿ ಒಟ್ಟೂ 10ಕ್ಕೂ ಜನರನ್ನು ವಶಕ್ಕೆ ಪಡೆಯಲಾಗಿದೆ, ತನಿಖೆ ನಡೆಯುತ್ತಿದೆ ಎಂದು ಹೇಳಿಕೆ ನೀಡಿದ್ದಾರೆ. ಆರೋಪ ಸಾಬೀತಾದರೆ 7 ವರ್ಷಗಳ ಕಾಲ ಶಿಕ್ಷೆ ನೀಡಲಾಗುತ್ತದೆಯಂತೆ.






### ರೇಣುಕಾಸ್ವಾಮಿ ಹತ್ಯೆ ಆಗಿದ್ದು ಹೇಗೆ?

ದರ್ಶನ್ ಅವರು ರೇಣುಕಾಸ್ವಾಮಿಯನ್ನು ಚಿತ್ರದುರ್ಗದಿಂದ ಬೆಂಗಳೂರಿಗೆ ಕರೆದುಕೊಂಡು ಬರಲು ಚಿತ್ರದುರ್ಗದ ಅಭಿಮಾನಿಗಳ ಸಂಘದ ಅಧ್ಯಕ್ಷ ರಘು ಅವರಿಗೆ ಫೋನ್ ಮಾಡಿ ಹೇಳಿದ್ದಾರೆ ಎನ್ನಲಾಗಿದೆ. ಆ ನಂತರ ಅವರನ್ನು ಕಾಮಾಕ್ಷಿಪಾಳ್ಯದ ಶೆಡ್‌ಗೆ ಕರೆದುಕೊಂಡು ಬರಲಾಗಿತ್ತು. ಬೆಂಗಳೂರಿನ ಶೆಡ್‌ನಲ್ಲಿ ರೇಣುಕಾಸ್ವಾಮಿ ಮೇಲೆ ಹಲ್ಲೆ ಆಗಿದ್ದು, ಭಾರೀ ಪೆಟ್ಟು ಬಿದ್ದ ಕಾರಣ ಮೃತಪಟ್ಟಿದ್ದಾರೆ. ಆಮೇಲೆ ಕಾಮಾಕ್ಷಿಪಾಳ್ಯದ ಬಳಿಯ ಮೋರಿಗೆ ರೇಣುಕಾಸ್ವಾಮಿಗೆ ಶವವನ್ನು ಬೀಸಾಡಲಾಗಿತ್ತು. ಆ ಶವವನ್ನು ನಾಯಿಗಳು ಎಳೆದಾಡುವಾಗ ಮೃತದೇಹ ಇರೋದು ಪತ್ತೆಯಾಗಿದೆ. ಇದನ್ನು ಕಂಡ ಕೇವಲ್ ರಾಮ್ ದೋರ್ ಜೀ ಎಂಬ ಅಪಾರ್ಟ್‌ಮೆಂಟ್ ಭದ್ರತಾ ಸಿಬ್ಬಂದಿ ಪೊಲೀಸರಿಗೆ ದೂರು ನೀಡಿದ್ದಾರೆ.

### 13 ಜನರು ಪೊಲೀಸ್ ವಶಕ್ಕೆ

ಪ್ರಕರಣದ ವಿಚಾರಣೆ ನಡೆಸಿದ ಮ್ಯಾಜಿಸ್ಟ್ರೇಟ್ ಕೋರ್ಟ್ ನ ನ್ಯಾಯಮೂರ್ತಿ ವಿಶ್ವನಾಥ ಗೌಡರ್ ಅವರು, ನಟ ದರ್ಶನ್, ಪವಿತ್ರಾಗೌಡ, ವಿ. ವಿನಯ್, ಆರ್. ನಾಗರಾಜು, ಎಂ. ಲಕ್ಷ್ಮಣ್, ಎಸ್. ಪ್ರದೋಶ್, ಕೆ. ಪವನ್, ದೀಪಕ್ ಕುಮಾರ್, ನಂದೀಶ್, ಕಾರ್ತಿಕ್, ನಿಖಿಲ್ ನಾಯಕ್, ಕೇಶವಮೂರ್ತಿ, ರಾಘವೇಂದ್ರ ಅಲಿಯಾಸ್ ರಾಘು ಎಲ್ಲಾ ಆರೋಪಿಗಳನ್ನು 6 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿದ್ದಾರೆ.

**ಫಾಸ್ಟ್ ನ್ಯೂಸ್**

### ಜೂನ್12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಜಾಥಾ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ರಕ್ಷಣಾ ಘಟಕ, ವಕೀಲರ ಸಂಘ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಇದೇ ಜೂನ್ 12ರಂದು ಬೆಳಿಗ್ಗೆ 9.30ಕ್ಕೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಗಾಯಿತ್ರಿ ಸರ್ಕಲ್ ಬಳಿಯ ಸಂಪಿಗೆ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಜಾಥಾ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಅಧ್ಯಕ್ಷರಾದ ರೋಣ ವಾಸುದೇವ್ ಜಾಥಾ ಉದ್ಘಾಟನೆ ನೆರವೇರಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಡಾ.ಸಿ.ಪ್ರಭಾಕರ್, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಡಾ.ಆರ್.ಸುಬ್ರನಾಯಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಜಿಲ್ಲಾವಾರ್ತಾಧಿಕಾರಿಬಿ.ವಿ.ತುಕಾರಾಂರಾವ್,ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ನಾಸೀರುದ್ದೀನ್ ಭಾಗವಹಿಸುವರು ಎಂದು ಕಾರ್ಮಿಕ ಅಧಿಕಾರಿ ಬಿ.ಜಿ.ಚಂದ್ರಶೇಖರಯ್ಯ ತಿಳಿಸಿದ್ದಾರೆ.

### ಜೂನ್ 12ರಂದು ಸಂಪ್ರದಾಯಗಳಲ್ಲಿ ವಿಜ್ಞಾನ, ಪವಾಡ ಗುಟ್ಟು ಬಯಲು


» ಚಿತ್ರದುರ್ಗ

ದಾವಣಗೆರೆ ವಿಶ್ವವಿದ್ಯಾನಿಲಯ ರಾಷ್ಟ್ರೀಯ ಸೇವಾ ಯೋಜನಾ ಘಟಕ, ದಾವಣಗೆರೆ ವಿಶ್ವವಿದ್ಯಾನಿಲಯ ಘಟಕ ಕಾಲೇಜು–ತುರುವನೂರು ವತಿಯಿಂದ ಜೂನ್ 10 ರಿಂದ 16 ರವರೆಗೆ ಚಿತ್ರದುರ್ಗ ತಾಲ್ಲೂಕಿನ ಕೂನಬೇವು ಗ್ರಾಮದಲ್ಲಿ ಎನ್‌ಎಸ್‌ಎಸ್ ಶಿಬಿರ ಆಯೋಜಿಸಲಾಗಿದ್ದು, ಜೂನ್ 12ರಂದು ಸಂಜೆ 6ಕ್ಕೆ "ಸಂಪ್ರದಾಯಗಳಲ್ಲಿ ವಿಜ್ಞಾನ ಮತ್ತು ಪವಾಡ ಗುಟ್ಟು ಬಯಲು" ಕಾರ್ಯಕ್ರಮ ನಡೆಯಲಿದೆ.

ತುರುವನೂರಿನ ದಾವಣಗೆರೆ ವಿವಿ ಘಟಕ ಕಾಲೇಜಿನ ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ವಿ.ಕೆ.ಸಂತೋಷ್ ಕುಮಾರ್ ಅಧ್ಯಕ್ಷತೆ ವಹಿಸುವರು. ತುರುವನೂರು ಸರ್ಕಾರಿ ಪಿಯು ಕಾಲೇಜು ರಸಾಯನಶಾಸ್ತ್ರ ಉಪನ್ಯಾಸಕ ನಾಗೇಂದ್ರ ಚೌಧರಿ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಕೂನಬೇವು ಗ್ರಾಮದ ಎಸ್‌ಡಿಎಂಸಿ ಅಧ್ಯಕ್ಷ ಎನ್.ಟಿ.ಮಹಾಂತೇಶ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಪೂಜಾರ್ ಮಂಜಣ್ಣ, ಸದಸ್ಯರಾದ ಪ್ರಕಾಶ್, ಐಶ್ವರ್ಯ, ಬೋರಮ್ಮ, ಎಸ್‌ಡಿಎಂಸಿ ಸದಸ್ಯರಾದ ಪಿ.ರಾಘವೇಂದ್ರ, ಪಿ.ಆರ್.ಶಿವಣ್ಣ, ಪಿ.ನವೀನ್, ಅಧೀಕ್ಷಕ ಪಿ.ಮಂಜುನಾಥ, ಕನ್ನಡ ಬೋಧನಾ ಸಹಾಯಕ ಅಶೋಕ್ ಕುಮಾರ್, ರಾಜ್ಯಶಾಸ್ತ್ರ ಬೋಧನಾ ಸಹಾಯಕ ಬಿ.ನಿಂಗಣ್ಣ ಭಾಗವಹಿಸುವರು. ಕಾರ್ಯಕ್ರಮದ ನಂತರ ಶಿಬಿರಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಪ್ರಕಟಣೆ ತಿಳಿಸಿದೆ.

**ಪ್ರಮುಖ ಸುದ್ದಿ**

# ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ: ವಿದ್ಯುತ್ ಶಾರ್ಟ್‌ಸರ್ಕ್ಯೂಟ್‌ನಿಂದ 8 ಲಕ್ಷರು. ನಷ್ಟ

» ಚಳ್ಳಕೆರೆ

ನಗರದ ಕೇಂದ್ರಭಾಗದಲ್ಲಿರುವ ಶೈಕ್ಷಣಿಕ ಪ್ರಗತಿಗೆ ಆಧಾರವಾಗಿರುವ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ತಡರಾತ್ರಿ ನಡೆದ ಶಾರ್ಟ್‌ಸರ್ಕ್ಯೂಟ್‌ಗೆ ಕಚೇರಿಯಲ್ಲಿದ್ದ ಎಲ್ಲಾ ಕಂಪ್ಯೂಟರ್, ಟೇಬಲ್ ಹಾಗೂ ಎಲೆಕ್ಟ್ರಾನಿಕ್ ವಸ್ತುಗಳು ಸುಟ್ಟು ಹೋಗಿ ಸುಮಾರು 8 ಲಕ್ಷಕ್ಕೂ ಹೆಚ್ಚು ನಷ್ಟ ಸಂಭವಿಸಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾಹಿತಿ ನೀಡಿದ್ದಾರೆ.

ಕಚೇರಿಯ ಅಧೀಕ್ಷಕ ಪುರುಷೋತ್ತಮ ಪೊಲೀಸರಿಗೆ ನೀಡಿದ ದೂರಿನಲ್ಲಿ ಸೋಮವಾರ ರಾತ್ರಿ ವಿದ್ಯುತ್ ಶಾರ್ಟ್‌ಸರ್ಕ್ಯೂಟ್‌ಗೆ ಕಚೇರಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಏಳು ಕಂಪ್ಯೂಟರ್‌ಗಳು, ಫ್ಯಾನ್ ಹಾಗೂ ಟೇಬಲ್, ಕುರ್ಚಿಗಳು ಸಂಪೂರ್ಣ ಸುಟ್ಟಿವೆ.

ಸೋಮವಾರ ಸಂಜೆ ಕೆಲಸ ಮುಗಿದ ನಂತರ ಕಚೇರಿಗೆ ಬೀಗ ಹಾಕಲಾಗಿತ್ತು, ರಾತ್ರಿ ಯಾವುದೋ ಸಮಯದಲ್ಲಿ ವಿದ್ಯುತ್ ಶಾರ್ಟ್‌ಸರ್ಕ್ಯೂಟ್‌ನಿಂದ ಈ ಅವಘಡ ಸಂಭವಿಸಿದೆ.

ಶಿಕ್ಷಣ ಇಲಾಖೆಯ ಎಲ್ಲಾ ದಾಖಲಾತಿಗಳನ್ನು ಕಂಪ್ಯೂಟರ್ ಸಿಪಿಯುನಲ್ಲಿ ದಾಖಲಿಸಲಾಗಿತ್ತು. ಆದರೆ, ಈಗ ಕೆಲವು ಬೆಂಕಿಯಲ್ಲಿ ಸುಟ್ಟಿವೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಚಳ್ಳಕೆರೆ ಪೊಲೀಸರು ದೂರು ಸ್ವೀಕರಿಸಿ ತನಿಖೆ ಮುಂದುವರೆಸಿದ್ದಾರೆ.



ಪ್ರಧಾನ ಮಂತ್ರಿ ನರೇಂದ್ರ ಮೋದಿಜಿಯವರ ನೂತನ ಸಚಿವ ಸಂಪುಟದಲ್ಲಿ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರನ್ನು ಇಂದು ನವದೆಹಲಿಯಲ್ಲಿ ಅವರ ನಿವಾಸದಲ್ಲಿ ಭೇಟಿಯಾದ ಚಿತ್ರದುರ್ಗ ಸಂಸದರಾದ ಗೋವಿಂದ್ ಕಾರಜೋಳವರು ಶುಭ ಕೋರಿದರು ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಎನ್ ರವಿಕುಮಾರ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

### ಮೊಳಕಾಲ್ಮೂರಿನಲ್ಲಿ 8.6 ಮಿ.ಮೀ ಮಳೆ

**ಚಿತ್ರದುರ್ಗ:** ಸೋಮವಾರ ಸುರಿದ ಮಳೆಯ ವಿವರದನ್ವಯ ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 8.6 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನ ರಾಯಾಪುರದಲ್ಲಿ 2.6 ಮಿ.ಮೀ, ಬಿ.ಜಿ.ಕೆರೆ 5.2 ಮಿ.ಮೀ, ದೇವಸಮುದ್ರದಲ್ಲಿ 6.2 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಮತ್ತೋಡಿನಲ್ಲಿ 2 ಮಿ.ಮೀ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.

## ಫಾಸ್ಟ್ ನ್ಯೂಸ್

### ದ್ವಿತೀಯ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ

» ಚಿತ್ರದುರ್ಗ

2024-25ನೇ ಶೈಕ್ಷಣಿಕ ಸಾಲಿನಲ್ಲಿ ಹಿರಿಯೂರು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಐಟಿಐ, ದ್ವಿತೀಯ ಪಿಯುಸಿ (ವಿಜ್ಞಾನ) ಹಾಗೂ (ತಾಂತ್ರಿಕ ವಿಷಯಗಳಲ್ಲಿ) ಲ್ಯಾಟರಲ್ ಎಂಟ್ರಿ ಮುಖಾಂತರ ದ್ವಿತೀಯವರ್ಷದಡಿಪ್ಲೋಮಾ ಸೀಟುಗಳಿಗೆಪ್ರವೇಶ ಪಡೆಯಲು ಬಯಸುವ ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಸಂಸ್ಥೆಗೆ ಹಾಜರಾಗಿ ಮೆರಿಟ್ ರೋಸ್ಟರ್ ಆಧಾರಿತ ಆಫ್‍ಲೈನ್ ಮೂಲಕ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿದೆ. ಜೂನ್ 25 ಅರ್ಜಿ ಸಲ್ಲಿಸಲು ಕೊನೆಯ ದಿನ. ಮೂಲ ಐಟಿಐ, ದ್ವಿತೀಯ ಪಿಯುಸಿ ಅಂಕಪಟ್ಟಿ, ಮೂಲ ಎಸ್‍ಎಸ್‍ಎಲ್‍ಸಿ ಅಂಕಪಟ್ಟಿ, ಮೂಲ ವರ್ಗಾವಣೆ ಪತ್ರ, ಜಾತಿ ಮತ್ತು ಆಧಾಯ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ, ಗ್ರಾಮೀಣ ಮಾಧ್ಯಮ ಪ್ರಮಾಣ ಪತ್ರ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಪ್ರವೇಶ ಪಡೆಯಬಹುದಾಗಿದೆ. ಹ ' ಚ್ಚಿ ನ ' ಮಾಹಿತಿಗಾಗಿ ಸಂಸ್ಥೆಯ ಪ್ರವೇಶ ವಿಭಾಗ 9900337587, 9482787542 ಗೆ ಸಂಪರ್ಕಿಸಬಹುದಾಗಿದೆ ಎಂದು ಹಿರಿಯೂರು ಸರ್ಕಾರಿ ಪಾಲಿಟೆಕ್ನಿಕ್ ಪ್ರಾಂಶುಪಾಲರು ತಿಳಿಸಿದ್ದಾರೆ.

### 19ರಂದು ಜಿ.ಪಂ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಪಂಚಾಯತ್ 2023-24ನೇ ಸಾಲಿನ ಮಾರ್ಚ್ ಅಂತ್ಯದವರೆಗಿನ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಮಿತಿ ಸಭೆಯನ್ನು ಇದೇ ಜೂನ್ 19ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾ ಪಂಚಾಯತ್‍ಸಭಾಂಗಣದಲ್ಲಿಆಯೋಜಿಸಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ತಿಳಿಸಿದ್ದಾರೆ.

### ಗಲಾಟೆ : ಪತಿಸಾವು : ಪತ್ನಿಯಿಂದ ನಾಲ್ವರ ಮೇಲೆ ದೂರು ದಾಖಲು.

» ಚಳ್ಳಕೆರೆ

ಚಿಲ್ಲರೆ ಅಂಗಡಿ ನಡೆಸುತ್ತಿದ್ದ ಮಹಿಳೆ ಮೇಲೆ ಕೈಹಾಕಿದ ಎಂದು ಪ್ರಾರಂಭವಾದ ಗಲಾಟೆ ಸಾವಿನಲ್ಲಿ ಅಂತ್ಯ ಕಂಡ ಘಟನೆ ತಾಲ್ಲೂಕಿನ ಗೋಪನಹಳ್ಳಿ ಗ್ರಾಮದಲ್ಲಿ ನಡೆದಿದೆ. ತಾಲ್ಲೂಕಿನ ಗೋಪನಹಳ್ಳಿ ಗ್ರಾಮದಲ್ಲಿ ಚಿಲ್ಲರೆಅಂಗಡಿ ನಡೆಸುತ್ತಿದ್ದ ಲಕ್ಕಮ್ಮ ಎಂಬ ಮಹಿಳೆಯ ಮೇಲೆ ಅದೇ ಗ್ರಾಮದ ಶಶಿ ಎಂಬುವವರು ಕೈಹಾಕಿ ನೀನು ಬೇಕು ಎಂದು ಎಳೆದಾಡಿದ್ದಾನೆ. ಇದನ್ನು ಕಂಡ ಮಗ ದಿನೇಶ ತಾಯಿಯ ರಕ್ಷಣೆಗೆ ಮುಂದಾದಾಗ ಅಲ್ಲೇ ಇದ್ದ ಶಶಿಯ ಸಂಬಂದಿಗಳಾದ ರಾಜ, ಅಶೋಕ, ಅಂಜಿನಪ್ಪ ದಿನೇಶನ ಮೇಲೆ ಹಲ್ಲೆ ನಡೆಸುವುದನ್ನು ಕಂಡ ದಿನೇಶ ತಂದೆ ತಿಪ್ಪೇಸ್ವಾಮಿ ಗಲಾಟೆ ಬಿಡಿಸಲು ಬಂದಿದ್ದಾರೆ. ಗಲಾಟೆಯ ಸಂದರ್ಭದಲ್ಲೇ ಅಲ್ಲೇ ಇದ್ದ ಕುರ್ಚಿಯ ಮೇಲೆ ಕುಳಿತು ಮೃತಪಟ್ಟಿರುತ್ತಾನೆ. ಈ ಬಗ್ಗೆ ದೂರು ನೀಡಿರುವ ಮೃತ ತಿಪ್ಪೇಸ್ವಾಮಿ ಪತ್ನಿ ಲಕ್ಕಮ್ಮ ನನ್ನ ಗಂಡನ ಸಾವಿಗೆ ಗ್ರಾಮದ ಶಶಿ, ರಾಜ, ಅಶೋಕ ಮತ್ತು ಅಂಜಿನಪ್ಪ ಕಾರಣ ಎಂದು ಆರೋಪಿಸಿದ್ದಾಳೆ. ಪಿಎ[illegible] ಕೆ.ಸತೀಶ್ ನಾಯ್ಕ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

### ವಿಕಲಾಂಗ ವ್ಯಕ್ತಿಗಳ ಪ್ರಾದೇಶಿಕ ಕೇಂದ್ರದಲ್ಲಿನ ಡಿ.ಇಡಿ ತರಬೇತಿಗೆ ಅರ್ಜಿ

» ದಾವಣಗೆರೆ

ದಾವಣಗೆರೆ ನಗರದಲ್ಲಿನ ವಿಕಲಾಂಗ ವ್ಯಕ್ತಿಗಳ ಸಂಯೋಜಿತ ಪ್ರಾದೇಶಿಕ ಕೇಂದ್ರ 2024-25 ಶೈಕ್ಷಣಿಕ ವರ್ಷದ ಡಿ.ಇಡಿ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಶ್ರವಣ ದೋಷ ಮತ್ತು ಬೌದ್ಧಿಕ ಬೆಳವಣಿಗೆಯ ಅಸಾಮರ್ಥ್ಯ ಕೋರ್ಸ್, ಪ್ರತಿ ಕೋರ್ಸ್‍ನಲ್ಲಿ 35 ಸೀಟುಗಳನ್ನು ಹೊಂದಿರುವ ಸಿಆರ್‍ಸಿ ಶೇ.50ರಷ್ಟು ಅಂಕಗಳೊಂದಿಗೆ 10+2 ಅರ್ಹತಾ ಮಾನದಂಡಗಳು (ಎಸ್‍ಸಿ,ಎಸ್.ಟಿ, ದಿವ್ಯಾಂಗ ವ್ಯಾಕ್ತಿಗಳು, ಆರ್ಥಿಕವಾಗಿ ಹಿಂದುಳಿದ ವ್ಯಕ್ತಿಗಳು) 2 ವರ್ಷದ ಕೋರ್ಸ್, ಶುಲ್ಕ ರೂ.24000/-, ಅಂಗವಿಕಲರು ಮತ್ತು ಅವರ ಒಡಹುಟ್ಟಿದವರು, ಕುಟುಂಬದ ಸದಸ್ಯರಿಗೆ ಯಾವುದೇ ಶುಲ್ಕವಿಲ್ಲ. ಅರ್ಜಿ ಸಲ್ಲಿಸಲು ಜೂನ್ 14 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ:8746043062, 8125359257 ನ್ನು ಸಂಪರ್ಕಿಸಬೇಕೆಂದು ಸಿಆರ್‍ಸಿ ನಿರ್ದೇಶಕಿ ಮೀನಾಕ್ಷಿ ತಿಳಿಸಿದ್ದಾರೆ.

### ಜಗಳೂರು ಲೋಕಾಯುಕ್ತ ಪೋಲೀಸ್ ಅಧೀಕ್ಷಕರಿಂದ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಜಗಳೂರುತಾಲ್ಲೂಕುಪಂಚಾಯಿತಿಸಭಾಂಗಣದಲ್ಲಿ ಜೂನ್ 13 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು.

# ಶಿಕ್ಷಣಕ್ಕೆ ಬಡತನ, ಸಿರಿತನ ತಾರತಮ್ಯವಿಲ್ಲ

» ನಾಯಕನಹಟ್ಟಿ

ಶೈಕ್ಷಣಿಕ ಪ್ರಗತಿಯಿಂದ ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿ ಸಾಧ್ಯ ಎಂದು ಪಟ್ಟಣ ಪಂಚಾಯತಿ ಸದಸ್ಯ ಜೆ.ಆರ್.ರವಿಕುಮಾರ್ ಹೇಳಿದರು.

ಪಟ್ಟಣದಲ್ಲಿ ಶಾಲಾ ಪರೀಕ್ಷೆ ಮೌಲ್ಯಾಂಕ ಮತ್ತು ನಿರ್ಣಯ ಮಂಡಳಿ ನಿವೃತ್ತ ಕಾರ್ಯದರ್ಶಿ ಎಂ.ರೇವಣಸಿದ್ದಪ್ಪನವರ ಅಭಿಮಾನಿ ಬಳಗದ ವತಿಯಿಂದ ಮಾದಿಗ ಸಮುದಾಯದಎಸ್‍ಎಸ್‍ಎಲ್‍ಸಿ,ಪಿಯುಸಿ ಯಲ್ಲಿ ಶೇ.90ಕ್ಕು ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಿಕ್ಷಣಕ್ಕೆ ಬಡತನ, ಸಿರಿತನದ ತಾರತಮ್ಯವಿಲ್ಲ. ಪರಿಶ್ರಮ ಮತ್ತು ಸತತ ಪ್ರಯತ್ನ ಅಗತ್ಯ. ಗ್ರಾಮೀಣ ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಪ್ರತಿಯೊಬ್ಬರೂ ಪ್ರೋತ್ಸಾಹ ನೀಡಬೇಕು. ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಶಿಕ್ಷಕರೊಂದಿಗೆ ಪೋಷಕರ ಸಹಕಾರ ಅಗತ್ಯವಾಗಿದೆ. ಅದರಲ್ಲೂ ಗ್ರಾಮೀಣ ಭಾಗದಲ್ಲಿ ಮಕ್ಕಳ ಪೋಷಕರ ಅನಕ್ಷರತೆ, ಜೀವನ ನಡೆಸಲು ಕಷ್ಟದ ಪರಿಸ್ಥಿಯಲ್ಲಿ ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಲು ಹಿಂದೇಟು ಹಾಕುತ್ತಾರೆ. ಇಂತಹ ಕೆಲಸವನ್ನು ಮಾಡಬಾರದು. ಸರ್ಕಾರವು ಸಾಕಷ್ಟು ಕಾರ್ಯಕ್ರಮಗಳನ್ನು



ಜಾರಿಗೆ ತಂದಿದೆ. ಇದನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ತಮ್ಮ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪ್ರೋತ್ಸಾಹ ನೀಡಬೇಕು ಎಂದರು.ಮಕ್ಕಳಲ್ಲಿ ಉತ್ತಮ ಸಂಸ್ಕೃತಿ, ಸಂಸ್ಕಾರ ಬೆಳೆಸಲು ಶಿಕ್ಷಣ ಸಹಕಾರಿಯಾಗಿದೆ. ಹೀಗಾಗಿ ಎಲ್ಲ ಪೋಷಕರು, ಶಿಕ್ಷಕರು ಕಾಳಜಿ ವಹಿಸಬೇಕು. ಸೀಮಿತ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದರ ಜೊತೆಗೆ ಇತರೆ ಎಲ್ಲಾ ಸಮುದಾಯದ ಬಡಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹ ನೀಡುವ ಕೆಲಸ ಹೆಚ್ಚಾಗಬೇಕಿದೆ ಎಂದು ಸಲಹೆ ನೀಡಿದರು.ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಸಹ ಕಾರ್ಯದರ್ಶಿ ಚನ್ನಕೇಶವ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗಾಗಿ ಶಿಕ್ಷಕರೊಂದಿಗೆ ಪಾಲಕರು ಸಹಕರಿಸಬೇಕು. ಹಿಂದುಳಿದ ಮಕ್ಕಳಿಗೆ ಪ್ರೋತ್ಸಾಹ ನೀಡಿದರೆ ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಹಕಾರಿಯಾಗಲಿದೆ ಎಂದರು.ಮುಖ್ಯಶಿಕ್ಷಕರಾದ ಎನ್. ಮಹಂತೇಶ್ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣ ಕ್ಷೇತ್ರಅತ್ಯಂತ ಮಹತ್ವತೆಯಿಂದ ಕೂಡಿದೆ. ಮಕ್ಕಳ ಶೈಕ್ಷಣಿಕ ಚಟುವಟಿಕೆಯಲ್ಲಿ ಪೋಷಕರ ಪಾತ್ರ ಮಹತ್ತರವಾಗಿದೆ. ಶಿಕ್ಷಣದೊಂದಿಗೆ ಮಾನವೀಯ ಮೌಲ್ಯಗಳು ಮಕ್ಕಳಲ್ಲಿ ಬೆಳೆಯಬೇಕಾದರೆ ಮನೆಯ ಪರಿಸರ ಹಾಗೂ ಶಾಲೆಯ ಪರಿಸರ ಎರಡೂ ಅತಿ ಮುಖ್ಯ. ಯಾವುದೇ ಶಾಲೆ ಅಥವಾ ಕಾಲೇಜಿನಲ್ಲಿ ಪಠ್ಯದಷ್ಟೇ ಇತರೆ ಚಟುವಟಿಕೆಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿದಲ್ಲಿ ಮಾತ್ರ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ ಎಂದರು.

ಎಸ್‍ಎಸ್‍ಎಲ್‍ಸಿ ಮತ್ತು ಪಿಯುಸಿಯಲ್ಲಿ ಶೇ.90ಕ್ಕೂ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಾದ ಮಂಜುಶ್ರೀ, ವರುಣಾಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಅಬ್ಬೇನಹಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಶಂಕರಸ್ವಾಮಿ, ಗ್ರಾಮ ಪಂಚಾಯತಿ ಮಾಜಿ ಸದಸ್ಯರಾದ ಆರ್.ಶ್ರೀಕಾಂತ್, ಮರಿಪಾಲಯ್ಯ, ಮುಖಂಡರಾದ ಮಲ್ಲಿಕಾರ್ಜುನ್, ಎಂ.ಅಜಯ್, ರಾಕೇಶ್, ಅಖಿಲೇಶ್ ಉಪಸ್ಥಿತರಿದ್ದರು.

# ರಾಜ್ಯಮಟ್ಟದ ವಧು-ವರರ ಸಮಾವೇಶ

» ಚಿತ್ರದುರ್ಗ

ಆರ್ಯ ವೈಶ್ಯ ಸಂಘ ಮತ್ತು ಆರ್ಯವೈಶ್ಯ ಅಧಿಕಾರಿಗಳ ಹಾಗೂ ವೃತ್ತಿನಿರತರ ಸಂಘದ ವತಿಯಿಂದ ಋಣಾನುಬಂಧ ಆರ್ಯವೈಶ್ಯ ರಾಜ್ಯಮಟ್ಟದ ಪ್ರಥಮ ವಧು-ವರರ ಉಚಿತ ಪರಿಚಯ ವೇದಿಕೆ ಜೂ. 16 ರಂದು ಬೆಳಿಗ್ಗೆ 10 ಕ್ಕೆ ವಾಸವಿ ಮಹಲ್‍ನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಆವೋಪ ಅಧ್ಯಕ್ಷ ಪಿ.ಎಲ್. ಸುರೇಶ್‍ರಾಜು ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಗಂಡು-ಹೆಣ್ಣನ್ನು ಒಂದು ವೇದಿಕೆಗೆ ತರುವ ಉದ್ದೇಶ ಇದಾಗಿದ್ದು, ಹಣ ಮತ್ತು ಸಮಯ ಎರಡು ಉಳಿತಾಯವಾಗಲಿದೆ. ಮಡಿಕೇರಿ, ಬೀದರ್, ಆಂಧ್ರ, ತಮಿಳುನಾಡಿನಿಂದಲೂ ಅರ್ಜಿಗಳು



ಬಂದಿವೆ.

ಇದುವರೆವಿಗೂ ಐದುನೂರು ಅರ್ಜಿಗಳು ನಮ್ಮ ಕೈಸೇರಿದ್ದು, ನೊಂದಣಿ ಹಾಗೂ ಗೋತ್ರ ಸೇರಿದಂತೆ ಹನ್ನೆರಡು ಕೌಂಟರ್‍ಗಳನ್ನು ತೆರೆಯಲಾಗಿದೆ. ಪ್ರತಿ ಹಳ್ಳಿ ಹಳ್ಳಿಗಳಿಂದಲೂ ಉಚಿತ ವಧು-ವರರ ಪರಿಚಯ ವೇದಿಕೆಗೆ ಬೇಡಿಕೆಯಿದ್ದು, ನಮ್ಮ ಜನಾಂಗದಲ್ಲಿ ಕನ್ಯೆಗಳು ಸಿಗುವುದು ಕಷ್ಟವಾಗಿರುವುದರಿಂದ ಋಣಾನುಬಂಧ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಆರ್ಯವೈಶ್ಯಜನಾಂಗದವರುಇದರ ಪ್ರಯೋಜನ ಪಡೆದುಕೊಳ್ಳುವಂತೆ ಪಿ.ಎಲ್.ಸುರೇಶ್‍ರಾಜು ಮನವಿ ಮಾಡಿದರು. ಆವೋಪ ಕಾರ್ಯದರ್ಶಿ ಡಿ.ಆರ್. ತಿಪ್ಪೇಸ್ವಾಮಿ, ಸಂಚಾಲಕ ಎನ್.ವಿ. ವೆಂಕಟೇಶಮೂರ್ತಿ, ಆವೋಪ ಮಾಜಿ ಅಧ್ಯಕ್ಷ ಮೋಹನ್‍ಕುಮಾರ್, ಜಂಟಿ ಕಾರ್ಯದರ್ಶಿ ಎ.ವಿ.ಸುರೇಶ್‍ಬಾಬು, ನಿರ್ದೇಶಕರುಗಳಾದ ಆರ್.ಸಿ. ನಾಗರಾಜು, ಸುಹಾಸ್, ಸಿ.ಜೆ.ಲಕ್ಷ್ಮಿನರಸಿಂಹಮೂರ್ತಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಜಿಲ್ಲಾ ಕ್ರೀಡಾಂಗಣದಲ್ಲಿ ಜೂ.21 ರಂದು ಅಂತರಾಷ್ಟ್ರೀಯ ಯೋಗ ದಿನ



» ದಾವಣಗೆರೆ

ಅಂತರಾಷ್ಟ್ರೀಯ ಯೋಗ ದಿನವನ್ನು ಜೂನ್ 21 ರಂದು ಆಚರಿಸಲು ಎಲ್ಲಾ ಸಿದ್ದತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಯೋಗ ದಿನ ಸಿದ್ದತೆ ಬಗ್ಗೆ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದು 10 ನೇ ಅಂತರಾಷ್ಟ್ರೀಯ ಯೋಗ ದಿನವಾಗಿದ್ದು ವಿಶೇಷವಾಗಿ ಆಚರಿಸಲಾಗುತ್ತಿದೆ. ಕಾರ್ಯಕ್ರಮವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಸೇರಿದಂತೆ ವಿವಿಧ ಯೋಗ ಸಂಸ್ಥೆಗಳ ಸಹಕಾರದಲ್ಲಿ ಆಚರಿಸಲಾಗುತ್ತಿದೆ ಎಂದರು. ಯೋಗ ದಿನ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಗ್ಗೆ 5 ರಿಂದ 6 ಗಂಟೆಯವರೆಗೆ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾನಿಲಯದಿಂದ ಧ್ಯಾನ, ಬೆ.6 ರಿಂದ 6.40 ರವರೆಗೆ ವೇದಿಕೆ ಕಾರ್ಯಕ್ರಮ, 6.40 ಯಿಂದ 7.30 ವರೆಗೆ ಯೋಗ ಕಾರ್ಯಕ್ರಮ ಇರುತ್ತದೆ. ಈ ಕಾರ್ಯಕ್ರಮದಲ್ಲಿ 5 ಸಾವಿರಕ್ಕಿಂತ ಹೆಚ್ಚಿನ ಪ್ರತಿನಿಧಿಗಳನ್ನು ಪಾಲ್ಗೊಳ್ಳುವಂತೆ ಮಾಡಲು ಯೋಜಿಸಲಾಗಿದೆ ಎಂದರು. ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ॥ ಯೋಗೇಂದ್ರಕುಮಾರ್ ಬಿ.ಯು. ಅವರು ಯೋಗ ದಿನದ ಕುರಿತು ಮಾಹಿತಿ ನೀಡಿದರು. ಸಭೆಯಲ್ಲಿ ಉಪವಿಭಾಗಾಧಿಕಾರಿ ದುರ್ಗಶ್ರೀ, ಉಪಕಾರ್ಯದರ್ಶಿ ಕೃಷ್ಣನಾಯ್ಕ, ಡಿಡಿಪಿಐ ಕೊಟ್ರೇಶ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಮುಖ್ಯಸ್ಥರು ಹಾಗೂ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಮತ್ತು ಯೋಗಾಸಕ್ತ ಸಂಘ, ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಕ್ಷಿಪ್ರ ಪ್ರಸಾದ ಮಹಾಗಣಪತಿ ದೇವಸ್ಥಾನದ ವಾರ್ಷಿಕೋತ್ಸವ

» ಚಿತ್ರದುರ್ಗ

ನಾಗರೀಕ ಜಗತ್ತಿನಲ್ಲಿ ಒತ್ತಡದಲ್ಲಿರುವ ನಾಗರೀಕ ಸಮೂಹ, ಯುವ ಜನಾಂಗ ಸಾಂಸ್ಕೃತಿಕ, ಆಧ್ಯಾತ್ಮಿಕ, ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಮೂಲಕ ನೆಮ್ಮದಿಯ ಜೀವನ ಕಂಡುಕೊಳ್ಳಬಹುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ತಿಳಿಸಿದರು.

ದವಳಗಿರಿ ಬಡಾವಣೆಯಲ್ಲಿರುವ ಕ್ಷಿಪ್ರ ಪ್ರಸಾದ ಮಹಾ ಗಣಪತಿ ದೇವಸ್ಥಾನದ ಹನ್ನೊಂದನೆ ವಾರ್ಷಿಕೋತ್ಸವ ಸಮಾರಂಭದ ಅಂಗವಾಗಿ ಏರ್ಪಡಿಸಲಾಗಿದ್ದ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಕ್ಷಿಪ್ರ ಪ್ರಸಾದ ಮಹಾಗಣಪತಿ ದೇವಸ್ಥಾನದಲ್ಲಿ ದವಳಗಿರಿ ಬಡಾವಣೆಯ ನಾಗರೀಕರು ಸೇರಿಕೊಂಡು ಹನ್ನೊಂದು ವರ್ಷಗಳಿಂದಲೂ ಇಂತಹ ಸಾಂಸ್ಕೃತಿಕ ಕಾರ್ಯಕ್ರಮ ಆಚರಿಸಿಕೊಂಡು ಬರುತ್ತಿರುವುದನ್ನು ನೋಡಿದರೆ ಹಬ್ಬದ ವಾತಾವರಣ ನಿರ್ಮಾಣವಾಗಿದೆ. ಎಲ್ಲಾ



ವಯೋಮಾನದವರು ಇಂತಹ ಧಾರ್ಮಿಕ ಸಮಾರಂಭಗಳಲ್ಲಿ ಭಾಗವಹಿಸಿದರೆ ಮನಸ್ಸು ಹಗುರವಾಗಿ ನೆಮ್ಮದಿ ಸಿಗುತ್ತದೆ ಎಂದು ಹೇಳಿದರು.ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಸಿ.ನಿರಂಜನಮೂರ್ತಿ, ಸಿ.ಜಿ.ಶ್ರೀನಿವಾಸ್, ಎಲ್.ಷಣ್ಮುಖ, ಹೊರಕೆ ರಂಗಪ್ಪ, ಈಶ್ವರಪ್ಪ, ರಾಜಣ್ಣ, ಕೆ.ಪ್ರಾಣೇಶ್, ಹಾಸ್ಯ ಸಾಹಿತಿ ಜಗನ್ನಾಥ್, ಓ.ಬಿ.ಬಸವರಾಜ್ ವೇದಿಕೆಯಲ್ಲಿದ್ದರು.

## ವಿದ್ಯುತ್ ವ್ಯತ್ಯಯ

ದಾವಣಗೆರೆ: 266/11 ಕೆ.ವಿ. ಮೆಳ್ಳೆಕಟ್ಟೆ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಕಾರ್ಯ ಹಮ್ಮಿಕೊಂಡಿರುವುದರಿಂದ ಜೂನ್ 12 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಮೆಳ್ಳೆಕಟ್ಟೆ ಫೀಡರ್ ವ್ಯಾಪ್ತಿಯ ಆಲೂರು, ಬಿ.ಜಿ.ಹಳ್ಳಿ, ಸಿದ್ದನೂರು, ಮಲ್ಲಾಪುರ, ಗುಡಾಳು, ಅಣಜಿ, ಕಿತ್ತೂರು, ಕಂದನಕೋವಿ, ಮೆಳ್ಳೆಕಟ್ಟೆ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಕಾಡಜ್ಜಿ ಫೀಡರ್ ವ್ಯಾಪ್ತಿಯ ರೆಡ್ಡಿ ಕ್ಯಾಂಪ್, ಪುಟಗಾನಾಳು, ಶ್ರಿರಾಮನಗರ, ಕಾಡಜ್ಜಿ, ಬಸವಾನಾಳು, ನಾಗರಕಟ್ಟೆ ಗ್ರಾಮಗಳು, ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

## ಪ್ರಮುಖ ಸುದ್ದಿ

### ಕೇಂದ್ರದಲ್ಲಿ ಎನ್‍ಡಿಎ ಸರ್ಕಾರದ ಹ್ಯಾಟ್ರಿಕ್ ವಿಜಯ

# ರಾಷ್ಟ್ರದ ಅಭಿವೃದ್ದಿಗೆ ಮೋದಿ ಸಂಕಲ್ಪ: ಕಾರ್ಯಕರ್ತರ ಹರ್ಷ

» ಚಳ್ಳಕೆರೆ

ಕೇಂದ್ರದಲ್ಲಿ ಮತ್ತೊಮ್ಮೆ ಪ್ರಧಾನಮಂತ್ರಿ ನರೇಂದ್ರಮೋದಿ ನೇತೃತ್ವದ ಎನ್‍ಡಿಎ ಸರ್ಕಾರ ಮೂರನೇ ಬಾರಿಗೆ ರಚನೆಯಾಗುವ ಮೂಲಕ ಹ್ಯಾಟ್ರಿಕ್ ವಿಜಯಸಾಧಿಸಿದನರೇಂದ್ರಮೋದಿಯವರ ಅಧಿಕಾರ ಸ್ವೀಕಾರ ಸಮಾರಂಭ ಹಾಗೂ ರಾಜ್ಯದ ಐವರು ಸಂಸದರಿಗೆ ಕೇಂದ್ರ ಸಂಪುಟದಲ್ಲಿ ಸ್ಥಾನ ಕಲ್ಪಿಸಿದ ಹಿನ್ನೆಲೆಯಲ್ಲಿ ಬಿಜೆಪಿಯ ಕಾರ್ಯಕರ್ತರು ನಗರದ ಶ್ರೀವೀರಭದ್ರಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಒಂದುನೂರು ತೆಂಗಿನ ಕಾಯಿ ಒಡೆದು ಪೂಜೆ ಸಲ್ಲಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಬಿಜೆಪಿ ಹಿರಿಯ ಮುಖಂಡ, ಮಾಜಿ ನಗರಸಭಾ ನಾಮಿನಿ ಸದಸ್ಯ ಡಿ.ಎಂ. ತಿಪ್ಪೇಸ್ವಾಮಿ ಮಾತನಾಡಿ, 2024ರ ಲೋಕಸಭಾ ಚುನಾವಣೆ ರಾಷ್ಟ್ರದ ಪಾಲಿಗೆ ಬಹುದೊಡ್ಡ ಚುನಾವಣೆಯಾಗಿ ವಿಶ್ವದ ಗಮನಸೆಳೆದಿತ್ತು. ಮೋದಿಯವರ ಹ್ಯಾಟ್ರಿಕ್ ವಿಜಯಕ್ಕೆ ಕಾಂಗ್ರೆಸ್ ಸೇರಿದಂತೆ ಹಲವಾರು ವಿರೋಧ ಪಕ್ಷಗಳು ಅಪಪ್ರಚಾರದ



ಮೂಲಕ ಅಡ್ಡಿಪಡಿಸುತ್ತಿದ್ದವು. ಕಳೆದ ಹತ್ತು ವರ್ಷಗಳ ಎನ್‍ಡಿಎ ಸರ್ಕಾರದ ಸಾಧನೆಯನ್ನು ವಿಶ್ವವೇ ಮೆಚ್ಚಿದ್ದರೂ ವಿರೋಧ ಪಕ್ಷಗಳು ಮಾತ್ರ ಮೋದಿ ವಿರುದ್ಧ ಅಪಪ್ರಚಾರದ ಅಸ್ತ್ರ ಪ್ರಯೋಗಿಸಿದರು. ಆದರೆ, ರಾಷ್ಟ್ರದ ಮತದಾರ ಮತ್ತೊಮ್ಮೆ ಮೋದಿ ಸರ್ಕಾರವನ್ನು ಬಯಸಿ ಮತ ನೀಡಿದ್ದಾನೆ. ಕೇಂದ್ರದಲ್ಲಿ ಯಶಸ್ವಿ ಆಡಳಿತ ನೀಡುವ ವಿಶ್ವಾಸವಿದೆ ಎಂದರು.

ಬಿಜೆಪಿಮುಖಂಡನಿಂಬೆಹಣ್ಣುಜಗದೀಶ್ ಮಾತನಾಡಿ, ರಾಜ್ಯದಲ್ಲಿ ಜೆಡಿಎಸ್ ಬಿಜೆಪಿ ಮೈತ್ರಿಕೂಟ 17ಸ್ಥಾನಗಳಲ್ಲಿ ಜಯಗಳಿಸಿದೆ. ವಿಶೇಷವಾಗಿ ಬಿಜೆಪಿ, ಜೆಡಿಎಸ್‍ನ ಎಲ್ಲಾ ಹಂತದ ನಾಯಕರು ಚುನಾವಣಾ ಸಂದರ್ಭದಲ್ಲಿ ಅತ್ಯಂತ ವಿಶ್ವಾಸಪೂರ್ವಕವಾಗಿ ಗೆಲುವಿಗೆ ಪ್ರಾಮಾಣಿಕ ಪ್ರಯತ್ನ ನಡೆಸಿ ರಾಜ್ಯದಲ್ಲಿ ಮೈತ್ರಿಕೂಟ ಮುನ್ನಡೆಗೆ ಕಾರಣರಾಗಿದ್ದಾರೆ. ಕೇಂದ್ರದಲ್ಲಿ ಐದು ಸಂಸದರಿಗೆ ಮಂತ್ರಿ ಸ್ಥಾನ ನೀಡಲಾಗಿದೆ. ಕರ್ನಾಟಕ ರಾಜ್ಯದ ಸರ್ವತೋಮುಖ ಅಭಿವೃದ್ದಿಗೆ ಐದು ಕೇಂದ್ರ ಸಚಿವರ ಕೊಡುಗೆ ಅಪಾರವಾಗಲಿದೆ ಎಂದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯರಾದ ವೆಂಕಟೇಶ್, ಪಾಲಮ್ಮ, ಬಿಜೆಪಿ ಮಹಿಳಾ ಮೋರ್ಚಾ ಪದಾಧಿಕಾರಿಗಳಾದ ಜಗದಾಂಭ, ಶಾಂತಮ್ಮ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಪಾವತಿ ಆಧಾರದ ಮೇಲೆ ಫಿಜಿಯೋಥೆರಪಿಸ್ಟ್‌ಗೆ ಅರ್ಜಿ ಆಹ್ವಾನ

» ದಾವಣಗೆರೆ

ಶಾಲಾ ಶಿಕ್ಷಣ ಮತ್ತು ಸಮಗ್ರ ಶಿಕ್ಷಣ ಯೋಜನೆಯಡಿ ಪ್ರಸಕ್ತ ಸಾಲಿಗೆ ಫಿಜಿಯೋಥೆರಪಿಸ್ಟ್ ಸೇವೆಯನ್ನು ಕೆಲಸ ಮತ್ತು ಪಾವತಿ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ವಿಶೇಷ ಅಗತ್ಯವುಳ್ಳ ಮಕ್ಕಳ ಸಮನ್ವಯ ಶಿಕ್ಷಣ ಮಧ್ಯವರ್ತನ ಕಾರ್ಯಚಟುವಟಿಕೆಗಳ ಕಾರ್ಯ ಅನುಷ್ಠಾನಕ್ಕಾಗಿ ತೀವ್ರ ನ್ಯೂನತೆ ಹೊಂದಿರುವ ವಿಶೇಷ ಚೇತನ ಮಕ್ಕಳಲ್ಲಿ ಗುರುತಿಸಲ್ಪಟ್ಟಿರುವ "ದೈಹಿಕ ನ್ಯೂನತೆ" ಮತ್ತು "ಬಹುನ್ಯೂನತೆ" ಹೊಂದಿರುವ ಮಕ್ಕಳಿಗೆ ಫಿಜಿಯೋಥೆರಪಿ ಮೂಲಕ ನ್ಯೂನತೆಯ ಪ್ರಮಾಣವನ್ನು ತಗ್ಗಿಸುವ ದೃಷ್ಟಿಯಿಂದ ಜಿಲ್ಲೆಯ 6 ತಾಲ್ಲೂಕುಗಳಲ್ಲಿ ಅಗತ್ಯತೆ ಇರುವ ಮಕ್ಕಳಿಗೆ ಫಿಜಿಯೋಥೆರಪಿ ಸೇವೆ ಒದಗಿಸಲು ಡಿ.ಪಿ.ಟಿ ಅಥವಾ ಬಿ.ಪಿ.ಟಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಜೂನ್ 20 ರೊಳಗೆ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಸಮಗ್ರ ಶಿಕ್ಷಣ ಕರ್ನಾಟಕ, ಕೆ.ಇ.ಬಿ ಸರ್ಕಲ್, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಶಾಲಾ ಶಿಕ್ಷಣ ಮತ್ತು ಸಾಕ್ಷರಾತಾ ಇಲಾಖೆಯ ಉಪನಿರ್ದೇಶಕರಾದ ಜಿ.ಕೊಟ್ರೇಶ್ ತಿಳಿಸಿದ್ದಾರೆ.

### 25,045 ಮೆಟ್ರಿಕ್ ಟನ್ ರಸಗೊಬ್ಬರ, 35,000 ಬಿತ್ತನೆ ಬೀಜ ದಾಸ್ತಾನು

# ಜಿಲ್ಲೆಯಲ್ಲಿ ಚುರುಕುಗೊಂಡ ಕೃಷಿ ಚಟುವಟಿಕೆ

» ಚಿತ್ರದುರ್ಗ



ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಮಳೆಯು ರೈತರ ಮೊಗದಲ್ಲಿ ನೆಮ್ಮದಿ ಮತ್ತು ಸಂತಸ ಮೂಡಿಸಿದೆ. ಪ್ರಸ್ತುತ ಜಿಲ್ಲೆಯಾದ್ಯಂತ ಕೃಷಿ ಚಟುವಟಿಕೆಗಳು ಅತ್ಯಂತ ಬಿರುಸಿನಿಂದ ನಡೆಯುತ್ತಿದ್ದು, ಜಿಲ್ಲೆಯಲ್ಲಿ 25,045 ಮೆಟ್ರಿಕ್ ಟನ್ ರಸಗೊಬ್ಬರ ಹಾಗೂ 35,000 ಕ್ವಿಂಟಲ್ ಬಿತ್ತನೆ ಬೀಜದ ದಾಸ್ತಾನು ಮಾಡಲಾಗಿದ್ದು, ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣೆ ಕಾರ್ಯವು ಸುಗಮವಾಗಿ ನಡೆಯುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆ: ಜಿಲ್ಲೆಯ ವಾರ್ಷಿಕ ಮಳೆಯು 540 ಮಿ.ಮೀ ಇದೆ. 2024ರ ಜನವರಿಯಿಂದ ಜೂನ್-10 ರವರೆಗೆ 127 ಮಿ.ಮೀ ವಾಡಿಕೆ ಮಳೆಯಾಗಬೇಕಿದ್ದು, ವಾಸ್ತವವಾಗಿ 203 ಮಿ.ಮೀ (ಹೆಚ್ಚುವರಿ ಶೇ.60) ಮಳೆ ಸುರಿದಿತ್ತು. ಬಳಿಕ ಜೂನ್-01 ರಿಂದ ಜೂನ್ 10ರ ವರೆಗಿನ 10 ದಿನಗಳಲ್ಲಿ 24 ಮಿ.ಮೀ ವಾಡಿಕೆ ಮಳೆಗಿಂತ 53 ಮಿ.ಮೀ ಮಳೆ (ಶೇ.121) ಸುರಿದಿದೆ. ಇದರಿಂದಾಗಿ ಜಿಲ್ಲೆಯಾದ್ಯಂತ ಕೃಷಿ ಚಟುವಟಿಕೆಗಳು ಹೆಚ್ಚು ಭರದಿಂದ ನಡೆಯುತ್ತಿವೆ.

35,000 ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು: ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ ಜೋಳ, ಮೆಕ್ಕೆಜೋಳ, ಸೂರ್ಯಕಾಂತಿ, ಶೇಂಗಾ, ತೊಗರಿ, ರಾಗಿ ಸೇರಿ ಒಟ್ಟು 31,801 ಕ್ವಿಂಟಾಲ್ ಬಿತ್ತನೆ ಬೀಜದ ಬೇಡಿಕೆ ಇದ್ದು, ಕೆಎಸ್ಎಸ್‌ಸಿ, ಎನ್‌ಎಸ್‌ಸಿ, ಕೆಓಎಫ್ ಸಂಸ್ಥೆಗಳು ಹಾಗೂ ಖಾಸಗಿ ಬಿತ್ತನೆ ಬೀಜ ಸರಬರಾಜುದಾರ ಸಂಸ್ಥೆಗಳಲ್ಲಿ 35,000 ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನಿದೆ. ರೈತರ ಬೇಡಿಕೆಗೆ ಅನುಗುಣವಾಗಿ ಬಿತ್ತನೆ ಬೀಜಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನು ಮಾಡಲಾಗಿದೆ. ವಿತರಣೆ ಕಾರ್ಯ ಪ್ರಾರಂಭವಾಗಿದ್ದು, 3228 ಕ್ವಿಂಟಾಲ್ ಬಿತ್ತನೆ ಬೀಜ ವಿತರಣೆಯಾಗಿದೆ.

ಜಿಲ್ಲೆಯಲ್ಲಿ 7,70,702 ಹೆಕ್ಟೇರ್ ಭೌಗೋಳಿಕ ಪ್ರದೇಶವಿದ್ದು, ಮುಂಗಾರು ಹಂಗಾಮಿನಲ್ಲಿ 3,26,748 ಹೆಕ್ಟೇರ್ ಪ್ರದೇಶ ಸಾಗುವಳಿಗೆ ಸಜ್ಜಾಗಿದೆ. ಒಟ್ಟು 3,01,562 ರೈತರು ಸಾಗುವಳಿದಾರರಿದ್ದು, ಆ ಪೈಕಿ 1,19,034 ಅತೀ ಸಣ್ಣ ರೈತರು, 96,837 ಸಣ್ಣ ರೈತರು, 82,102 ಮದ್ಯಮ ರೈತರು ಹಾಗೂ 3,589 ದೊಡ್ಡ ರೈತರಿದ್ದಾರೆ. ಶೇ.8.53ರಷ್ಟು ಬಿತ್ತನೆ ಪ್ರಗತಿ: ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರಿಗೆ 3,26,748 ಹೆಕ್ಟೇರ್ ಪ್ರದೇಶ ಬಿತ್ತನೆ ಗುರಿ ಇದ್ದು, ಇಲ್ಲಿಯವರೆಗೆ 27,872 ಹೆಕ್ಟೇರ್ ಪ್ರದೇಶ ಬಿತ್ತನೆಯಾಗಿದ್ದು, ಶೇ.8.53ರಷ್ಟು ಪ್ರಗತಿಯಾಗಿದೆ.

25,045 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು: ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ (ಏಪ್ರಿಲ್-2024 ರಿಂದ ಸೆಪ್ಟೆಂಬರ್-2024 ವರೆಗೆ) ಯೂರಿಯಾ, ಡಿ.ಎ.ಪಿ ಹಾಗೂ ಕಾಂಪ್ಲೆಕ್ಸ್ ಸೇರಿ ಒಟ್ಟು 64,171 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಇದ್ದು, ಖಾಸಗಿ ಡೀಲರ್ಸ್, ಕೆ.ಎಸ್.ಎಸ್.ಸಿ ಹಾಗೂ ಮಾರುಕಟ್ಟೆ ಫೆಡರಷನ್ ಮೂಲಕ 39,610 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜಾಗಿದೆ ಮತ್ತು 14,565 ಮೆಟ್ರಿಕ್ ಟನ್ ವಿತರಣೆಯಾಗಿದ್ದು, 25,045 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದೆ.

ಜಿಲ್ಲೆಯಲ್ಲಿ ಈ ವರ್ಷ ಉತ್ತಮ ಮಳೆಯಾಗುವ ಕುರಿತಂತೆ ಹವಾಮಾನ ಇಲಾಖೆಯ ಮುನ್ಸೂಚನೆಗಳು ಇದ್ದು, ಇದಕ್ಕೆ ಪೂರಕವಾಗಿ ಪೂರ್ವ ಮುಂಗಾರು ಉತ್ತಮವಾಗಿದೆ. ಕೃಷಿ ಚಟುವಟಿಕೆಗಳು ಉತ್ತಮವಾಗಿ ನಡೆಯುತ್ತಿವೆ. ಜಿಲ್ಲೆಯ ರೈತರು ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಪೂರೈಕೆಯಲ್ಲಿ ಯಾವುದೇ ಕೊರತೆಯಾಗದಂತೆ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಜಿಲ್ಲೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರ ದಾಸ್ತಾನು ಇದ್ದು, ರೈತರು ಯಾವುದೇ ರೀತಿಯ ಆತಂಕ, ಗೊಂದಲಪಡುವ ಅವಶ್ಯಕತೆ ಇಲ್ಲ. ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ವಿತರಣೆ ಮಾಡಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ತಿಳಿಸಿದ್ದಾರೆ.

## ತರಬೇತಿ ಪಡೆದು ಸ್ವ-ಉದ್ಯೋಗಿಗಳಾಗುವಂತೆ ಮಹಿಳೆಯರಿಗೆ ರುಡ್‌ಸೆಟ್ ನಿರ್ದೇಶಕಿ ರಾಧ ಕರೆ

» ಚಿತ್ರದುರ್ಗ



ಒಂದು ಕಾಲದಲ್ಲಿ ಅಡುಗೆ ಮನೆಗೆ ಸೀಮಿತಳಾಗಿದ್ದ ಮಹಿಳೆ ಇಂದು ಸಬಲೆಯಾಗಿ ಬದುಕಲು ಅನೇಕ ಯೋಜನೆಗಳಿವೆ ಎಂದು ರುಡ್‌ಸೆಟ್ ಸಂಸ್ಥೆಯ ನಿರ್ದೇಶಕಿ ಶ್ರೀಮತಿ ರಾಧ ತಿಳಿಸಿದರು.ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಸಿರಿಗೆರೆ ಯೋಜನಾ ಕಚೇರಿ ವ್ಯಾಪ್ತಿಯ ಡಿ.ಮದಕರಿಪುರ ಕಾರ್ಯಕ್ಷೇತ್ರದ ಸ್ಪೂರ್ತಿ ಜ್ಞಾನವಿಕಾಸ ಕೇಂದ್ರದಲ್ಲಿ ಮಹಿಳೆಯರಿಗೆ ಸ್ವ-ಉದ್ಯೋಗ ತರಬೇತಿ ಉದ್ಘಾಟಿಸಿ ಮಾತನಾಡಿದರು.ಧರ್ಮಸ್ಥಳದ ಹೇಮಾವತಿ ಅಮ್ಮನವರು ಜ್ಞಾನವಿಕಾಸ ಕಾರ್ಯಕ್ರಮ ಮೂಲಕ ಮಹಿಳೆಯರಿಗೆ ನಾನಾ ರೀತಿಯ ಮಾಹಿತಿಗಳನ್ನು ನೀಡುತ್ತ ಹೇಗೆ ಸ್ವಾವಲಂಭಿಯಾಗಿ ಬದುಕಬಹುದು ಎನ್ನುವುದನ್ನು ಕಲಿಸುತ್ತಿದ್ದಾರೆ. ಟೈಲರಿಂಗ್, ಎಂಬ್ರಾಯಿಡಿಂಗ್, ಅಣಬೆ ಬೇಸಾಯ, ಕುರಿ ಸಾಕಾಣಿಕೆ, ಬ್ಯೂಟಿ ಪಾರ್ಲರ್ ಇನ್ನು ಹತ್ತು ಹಲವಾರು ತರಬೇತಿಗಳನ್ನು ಪಡೆಯುವುದರಿಂದ ಮಹಿಳೆ ಮನೆಯಲ್ಲಿಯೇ ಕುಳಿತ ಹಣ ಸಂಪಾದಿಸುವ ಅವಕಾಶಗಳಿವೆ. ಎಲ್ಲವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

## ಮಣ್ಣು ಆರೋಗ್ಯ ಅಭಿಯಾನ: ಶಾಲಾ ಮಕ್ಕಳಿಗೆ ತರಬೇತಿ






» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ದೇವರಕೊಟ್ಟ ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಯ ಮಕ್ಕಳಿಗೆ ಮಂಗಳವಾರ ಮಣ್ಣು ಆರೋಗ್ಯ ಕುರಿತು ತರಬೇತಿ ನೀಡಲಾಯಿತು.

2024-25ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಶಾಲಾ ಮಕ್ಕಳಿಗೆ ಮಣ್ಣು ಆರೋಗ್ಯ ಅಭಿಯಾನ ಕುರಿತು ಕಾರ್ಯಕ್ರಮ ಆಯೋಜಿಸಿದ್ದು, 8ನೇ ತರಗತಿಯಿಂದ 12ನೇ ತರಗತಿವರೆಗಿನ ಮಕ್ಕಳಿಗೆ ಮಣ್ಣು ಆರೋಗ್ಯ ಕುರಿತು ತರಬೇತಿ ನೀಡಲಾಯಿತು. ತರಬೇತಿ ಕಾರ್ಯಕ್ರಮದಲ್ಲಿ ಯೋಜನೆಯ ಉದ್ದೇಶ, ಮಣ್ಣು ಮಾದರಿ ಸಂಗ್ರಹಣೆ, ವಿಶ್ಲೇಷಣೆ, ಮಣ್ಣು ಆರೋಗ್ಯ ಚೀಟಿ ತಯಾರಿ ಕುರಿತು ತರಬೇತಿ ನೀಡಲಾಯಿತು. ಒಟ್ಟು 50 ವಿದ್ಯಾರ್ಥಿಗಳು ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್, ಉಪ ಕೃಷಿ ನಿರ್ದೇಶಕ ಬಿ.ಎನ್.ಪ್ರಭಾಕರ್, ಸಹಾಯಕ ಕೃಷಿ ನಿರ್ದೇಶಕ ಮಂಜುನಾಥ್, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ರವಿಕುಮಾರ್, ಏಕಲವ್ಯ ಮಾದರಿ ವಸತಿ ಶಾಲೆಯ ಪ್ರಾಂಶುಪಾಲ ಪ್ರವೀಣ್ ಕುಮಾರ್, ಸಹಾಯಕ ಕೃಷಿ ನಿರ್ದೇಶಕರಾದ (ವಿಷಯ ತಜ್ಞರು) ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ ಎಂ.ಎಸ್.ಕಿರಣ್ ಕುಮಾರ್, ಆತ್ಮ ಸಿಬ್ಬಂದಿ, ಶಾಲೆಯ ಶಿಕ್ಷಕರು ಹಾಜರಿದ್ದರು.






# ಆನ್‌ಲೈನ್ ಗೇಮಿಂಗ್

## ಯುವ ಶಕ್ತಿಯ ಅಂತಃಸತ್ವಕ್ಕೆ ಕೊಳ್ಳಿಯಿಡುತ್ತಿರುವ ಅಪಾಯಕಾರಿ ಆಟ

ಮಾದಕ ದ್ರವ್ಯಗಳು ಈಗಾಗಲೇ ಸಾಕಷ್ಟು ಹಾನಿ ಮಾಡುತ್ತಿರುವಾಗ ಅದಕ್ಕಿಂತ ಅಪಾಯಕಾರಿಯಾಗಿ ಗ್ರಾಮೀಣ ಭಾಗಗಳಿಗೂ ದಾಳಿ ಇಟ್ಟು ಅಧಿಕೃತವಾಗಿಯೇ ಸಾರ್ವಜನಿಕ ಬದುಕನ್ನು ನಾಶ ಮಾಡಲು ಲೈಸೆನ್ಸ್ ಪಡೆದು ಪ್ರವೇಶಿಸಿರುವ ಜೂಜು ಕಟ್ಟೆಗಳು.....

ಕೇವಲ 25/30 ವರ್ಷಗಳ ಹಿಂದಿನವರೆಗೂ ಜೂಜು ಎಂಬುದನ್ನು ಪುರುಷ ವೇಶ್ಯಾ ವೃತ್ತಿ ಎಂದೇ ಪರಿಗಣಿಸಲಾಗಿತ್ತು. ಜೂಜುಕೋರನನ್ನು ದರೋಡೆಕೋರರಿಗಿಂತ ಕೀಳಾಗಿ ಕಾಣಲಾಗುತ್ತಿತ್ತು. ಜೂಜುಕೋರನ ಮನೆಗೆ ಹೆಣ್ಣು ಕೊಡಲು ಸ್ವತಃ ಗಂಡಿನ ಮನೆಯವರೆ ಒಪ್ಪುತ್ತಿರಲಿಲ್ಲ. ಪಾಪ ಇವನಿಂದ ಆ ಹೆಣ್ಣು ಮಗುವಿನ ಬಾಳು ಹಾಳಾಗುವುದು ಬೇಡ ಎಂಬ ಕಾರಣಕ್ಕಾಗಿ......

ಆದರೆ ಈಗ ಸರ್ಕಾರಗಳೇ ಆನ್ ಲೈನ್ ಜೂಜುಗಳಿಗೆ ಅನುಮತಿ ನೀಡುತ್ತಿವೆ. ನಮ್ಮ ಸೂಪರ್ ಮ್ಯಾನ್ ಗಳಾದ ಕೆಲವು ಮನೆಹಾಳ ಸಿನಿಮಾ ನಟರು ಮತ್ತು ಕ್ರೀಡಾಪಟುಗಳು ಎಕ್ಸ್ ಟ್ರಾ ಹಣಕ್ಕಾಗಿ ತಮ್ಮನ್ನೇ ಮಾರಿಕೊಂಡು ಜೂಜಿನ ಜಾಹೀರಾತುಗಳಲ್ಲಿ ನಾಚಿಕೆ ಮಾನ ಮರ್ಯಾದೆ ಇಲ್ಲದೇ ಅತ್ಯಂತ ಹೇಯ ಕೃತ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ......

ಒಂದು ಮನೆಯಲ್ಲಿ ಕೇವಲ ಒಬ್ಬ ಈ ಜೂಜಿನ ಚಟಕ್ಕೆ ಬಲಿಯಾದರೆ ಇಡೀ ಕುಟುಂಬವೇ ನಾಶವಾದಂತೆ. ಭಾರತೀಯ ಸಂಸ್ಕೃತಿಯಲ್ಲಿ ರಕ್ತ ಸಂಬಂಧಗಳಿಗೆ ಹೆಚ್ಚಿನ ಮಹತ್ವ ಇರುವುದರಿಂದ ಆ ಸಂಬಂಧದ ಎಲ್ಲರೂ ಮಾನಸಿಕ ಅವಮಾನ ಮತ್ತು ಆಘಾತದಿಂದ ತತ್ತರಿಸುತ್ತಾರೆ. ಮೊಬೈಲ್ ಇಂಟರ್ನೆಟ್ ಯುಗದಲ್ಲಿ ಇದು ಅತ್ಯಂತ ವೇಗವಾಗಿ ಮತ್ತು ವ್ಯಾಪಕವಾಗಿ ಹಬ್ಬುತ್ತಿದೆ.....

ಜೊತೆಗೆ ಈ ಮನೆಹಾಳ ಆನ್ ಲೈನ್ ಗೇಮಿಂಗ್ ನವರು ಆಕರ್ಷಣೆ ಮಾಡಲು ಉಚಿತವಾಗಿ ಪ್ರಾರಂಭದಲ್ಲಿ ಎಷ್ಟೋ ದೊಡ್ಡ ಮೊತ್ತದ ಹಣವನ್ನು ಪಾಯಿಂಟುಗಳ ರೂಪದಲ್ಲಿ ನೀಡಿ ಮನಸ್ಸು ಚಂಚಲಗೊಳ್ಳುವಂತೆ ಮಾಡುತ್ತಾರೆ. ಈ ಆಧುನಿಕ ಕಾಲದಲ್ಲಿ ಮೊದಲೇ ಯುವಕರು ಏನೇನೋ ಮಾನಸಿಕ ಒತ್ತಡಕ್ಕೆ, ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುತ್ತಾರೆ. ಅದರ ಸಂಪೂರ್ಣ ದುಷ್ಟ ಲಾಭವನ್ನು ಈ ಗೇಮಿಂಗ್ ನವರು ಪಡೆಯುತ್ತಾರೆ....

ಆನ್ ಲೈನ್ ಗೇಮಿಂಗ್ ವ್ಯವಹಾರ ಸಾವಿರಾರು ಕೋಟಿಗಳನ್ನು ದಾಟಿ ಮುನ್ನಡೆಯುತ್ತಿದೆ. ಈ ಧೋನಿ – ರೋಹಿತ್ ಶರ್ಮಾ ಸೇರಿ ಅನೇಕ ಕ್ರಿಕೆಟ್ ಮತ್ತು ಇತರ ಕ್ರೀಡಾ ಪಟುಗಳು ತಮ್ಮ ತಮ್ಮ ವೃತ್ತಿಯಲ್ಲಿ ಅಪಾರ ಹಣ ಗಳಿಸುತ್ತಾರೆ, ಜಾಹೀರಾತುಗಳು ಮೂಲಕ ಮತ್ತಷ್ಟು ಹಣ ಜೊತೆಗೆ ಇತರ ದೊಡ್ಡ ಕಂಪನಿಗಳಲ್ಲಿ ಹೂಡಿಕೆ ಮಾಡಿ ಅಲ್ಲಿಯೂ ಹಣ. ಇಷ್ಟರ ನಂತರವೂ ಈ ಮನೆಹಾಳ ಜೂಜಿನ ಜಾಹೀರಾತುಗಳಲ್ಲಿ ಭಾಗವಹಿಸಿ ಹಣ ಮಾಡಲು ಬಯಸಿ ಇಡೀ ಭಾರತೀಯ ಯುವ ಸಮೂಹ ದಾರಿ ತಪ್ಪಲು ಹಾದಿ ತೋರಿಸುತ್ತಾರೆ. ಇವರನ್ನು ತಲೆ ಹಿಡುಕರು ಎನ್ನಲು ಸಂಕೋಚ ಪಡಬೇಕೆ ಯೋಚಿಸಿ.....



ಈಗಿನ ನಮ್ಮ ದೇಶದ ಮಹತ್ವಾಕಾಂಕ್ಷೆಯ ಪ್ರಧಾನಿಯವರು ಭಾರತದ್ದು ಅಮೃತ ಕಾಲ. ಇದನ್ನು ವಿಶ್ವ ಗುರು ಮಾಡುವುದಾಗಿ ಪ್ರತಿ ಭಾಷಣದಲ್ಲೂ ಹೇಳುತ್ತಾರೆ. ಭಾರತದ ಆರ್ಥಿಕತೆಯನ್ನು ಇನ್ನೂ ಬೃಹತ್ ಮಾಡುವ ಕನಸನ್ನು ಹೊಂದಿದ್ದಾರೆ. ಬುಲೆಟ್ ಟ್ರೈನುಗಳು, ವಿಮಾನ ನಿಲ್ದಾಣಗಳು, ಸ್ಮಾರ್ಟ್ ಸಿಟಿಗಳು, ದಶಪಥ ರಸ್ತೆಗಳು, ಭವ್ಯ ಪಾರ್ಲಿಮೆಂಟ್ ಹೌಸ್ ಹೀಗೆ ವೈಭವೋಪೇತ ಅಭಿವೃದ್ಧಿ ಮಾಡಬೇಕಿದೆ. ಅದಕ್ಕಾಗಿ ಅವರಿಗೆ ತುಂಬಾ ತುಂಬಾ ದುಡ್ಡು ಬೇಕಾಗಿದೆ. ಯಾವ ಯಾವ ಮೂಲೆಗಳಿಂದ ಹಣ ಬಂದರೂ ಬಿಡುವುದಿಲ್ಲ. ಅದರಲ್ಲೂ ಅತಿಹೆಚ್ಚಿನ ತೆರಿಗೆ ಬರುವ ಆನ್ ಲೈನ್ ಗೇಮಿಂಗ್ ಉದ್ಯಮದ ಆದಾಯವನ್ನು ಕಳೆದುಕೊಳ್ಳಲು ಅವರು ಸಿದ್ದರಿಲ್ಲ. ಪ್ರತಿ ತಿಂಗಳೂ ಜಿಎಸ್ಟಿ ಆದಾಯ ಹೆಚ್ಚಾಗುತ್ತಲೇ ಇರಬೇಕು. ಅವರ ಮುಖ್ಯ ಗುರಿ ಅದೇ ಆಗಿದೆ. ಭಾಷಣದಲ್ಲಿ ಹೇಳುವುದು ಮಾತ್ರ ಧರ್ಮ ಸಂಸ್ಕೃತಿ ಪರಂಪರೆ ಆಚಾರ ವಿಚಾರ. ಆದರೆ ಅನುಮತಿ ಕೊಟ್ಟು ವ್ಯವಹಾರ ನಡೆಸುವುದು ಜೂಜು ಕೇಂದ್ರಗಳಿಂದ........

ಆನ್ ಲೈನ್ ಗೇಮಿಂಗ್ ಚಟಕ್ಕೂ ಪ್ರಧಾನ ಮಂತ್ರಿಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೂ ಏನು ಸಂಬಂಧ ಎಂದು ಕೆಲವರು ಕೇಳಬಹುದು. ಖಂಡಿತ ನೇರ ಸಂಬಂಧವಿದೆ. ಮನೆಯ ಯಜಮಾನ ಪ್ರಾಮಾಣಿಕ ದುಡಿಮೆಯಿಂದ ಸತ್ಯದ ಮಾರ್ಗದಲ್ಲಿ ಬೆಳೆದರೆ ಮಕ್ಕಳು ಸಹ ಹಾದಿ ತಪ್ಪುವ ಸಾಧ್ಯತೆಗಳು ಕಡಿಮೆ ಮತ್ತು ಸಂಪಾದಿಸಿದ ಹಣವನ್ನು ಸಂಸ್ಕಾರಯುತವಾಗಿ ಉಳಿಸಿ ಬೆಳೆಸುತ್ತಾರೆ. ಇಲ್ಲದಿದ್ದರೆ ಕೆಟ್ಟ ದುಷ್ಟ ಸಂಪಾದನೆಯ ಹಣವನ್ನು ಜೂಜು ಮುಂತಾದ ದುಶ್ಚಟಗಳಲ್ಲಿ ಎಲ್ಲವನ್ನೂ ಕಳೆಯುತ್ತಾರೆ. ಇತಿಹಾಸದ ಅನುಭವದಿಂದ ಇದು ಈಗಾಗಲೇ ಖಚಿತಪಟ್ಟಿದೆ....ಪ್ರತಿಯೊಬ್ಬರ ಬಳಿಯೂ ಮೊಬೈಲ್ ಇರುವುದರಿಂದ ಇದು ಅತ್ಯಂತ ವೇಗವಾಗಿ ಹರಡುತ್ತಿದೆ. ಚುಟುಕು ಕ್ರಿಕೆಟ್ ಇದಕ್ಕೆ ಮತ್ತಷ್ಟು ಪ್ರೋತ್ಸಾಹ ಕೊಡುತ್ತಿದೆ........


ಆನ್ ಲೈನ್ ಗೇಮಿಂಗ್ ಒಡೆಯರು ಈಗಾಗಲೇ ಕೋಟ್ಯಾಧಿಪತಿಗಳಾಗಿ ಭ್ರಷ್ಟ ಮಾರ್ಗದ ಮೂಲಕ ಸರ್ಕಾರಗಳ ಮೇಲೆಯೇ ನಿಯಂತ್ರಣ ಸಾಧಿಸುವ ಮಟ್ಟಕ್ಕೆ ಬೆಳೆದಿದ್ದಾರೆ. ಇದು ಇನ್ನೂ ಹೆಚ್ಚಾದರೆ ತುಂಬಾ ಕಷ್ಟ. ಕ್ರಿಕೆಟ್ ಬೆಟ್ಟಿಗ್ ನಿಂದ ದಾವೂದ್ ಇಬ್ರಾಹಿಂ ನಂತ ನಟೋರಿಯಸ್ ಕ್ರಿಮಿನಲ್ ಸೃಷ್ಟಿಯಾದ ಇತಿಹಾಸ ನಮ್ಮ ಕಣ್ಣ ಮುಂದೆಯೇ ಇದೆ. ಇಂತಹ ಕ್ರಿಮಿನಲ್ ಗಳು ತಮ್ಮ ಅಸ್ತಿತ್ವಕ್ಕೆ ಧಕ್ಕೆ ಬಂದಾಗ ಏನು ಮಾಡಲು ಹೇಸುವುದಿಲ್ಲ.

ಆನ್ ಲೈನ್ ಗೇಮಿಂಗ್ ನಿಂದ ಬರುವ ತೆರಿಗೆ ಆದಾಯ ಅಸಹ್ಯಕ್ಕೆ ಸಮಾನ ಎಂದು ಯಾರಾದರೂ ಈ ದೇಶದ ಮೌಲ್ಯಗಳನ್ನು – ಸಂಸ್ಕಾರಗಳನ್ನು ಕಾಪಾಡಬೇಕು ಎನ್ನುವವರು ದಯವಿಟ್ಟು ಪ್ರಧಾನಿಯವರಿಗೆ ಮನವರಿಕೆ ಮಾಡಿಕೊಡಿ.ಹೇಗಿದ್ದರೂಅನೇಕನಿಷೇಧಗಳನ್ನು ಮಾಡುವುದರಲ್ಲಿ ಈ ಪ್ರಧಾನಿಗಳು ಪರಿಣಿತರು. ಈ ಯುವ ಜನತೆಯ ಅತ್ಯಂತ ಮಾರಕ ಆನ್ ಲೈನ್ ಜೂಜು ಸಹ ನಿಷೇಧಕ್ಕೆ ಒಳಗಾಗಲಿ. ಈ ನಿಷೇಧದ ವಿರುದ್ಧ ಬಹುಶಃ ಕೆಲವೇ ಕೆಲವು ದುಷ್ಟ ಶಕ್ತಿಗಳು ಹೊರತುಪಡಿಸಿ ಯಾವ ಭಾರತೀಯರು ಪ್ರತಿಭಟನೆ ನಡೆಸುವುದಿಲ್ಲ. ಬದಲಾಗಿ ಇದರಿಂದ ಸಂತ್ರಸ್ತವಾದ ಸಾವಿರಾರು ಕುಟುಂಬಗಳು ಪ್ರಧಾನಿಗಳಿಗೆ ಹೃದಯ ಪೂರ್ವಕ ಕೃತಜ್ಞತೆಯನ್ನು ಸಲ್ಲಿಸುತ್ತಾರೆ........

ಈ ಕ್ಷಣದಲ್ಲಿ ಈ ಲೇಖನ ಬರೆಯುತ್ತಿರುವುದರಿಂದ ಈಗಿನ ಪ್ರಧಾನಿಗಳನ್ನು ಹೊಣೆ ಮಾಡಲಾಗಿದೆ. ವಾಸ್ತವವಾಗಿ ಅವರು ಮಾತ್ರವಲ್ಲ. ಹಿಂದಿನ ಮತ್ತು ಈಗಿನ ಎಲ್ಲಾ ರಾಜಕೀಯ ಪಕ್ಷಗಳ ಎಲ್ಲಾ ನಾಯಕರಿಗು ಈ ವಿಷಯದಲ್ಲಿ ಛೀಮಾರಿ ಹಾಕಬೇಕಿದೆ. ಆ ಅಧೋಗತಿಯಲ್ಲಿ ಶಾಸಕಾಂಗ ಮತ್ತು ಕಾರ್ಯಾಂಗವೂ ಸೇರಿ ಅನೇಕರ ಬೇಜವಾಬ್ದಾರಿ ಇದೆ........ಒಳ್ಳೆಯದನ್ನು ಕೇವಲ ಮಾತಿಗೆ ಸೀಮಿತಗೊಳಿಸಿ ಕೆಟ್ಟದ್ದನ್ನು ಮಾತ್ರ ಅನುಮತಿ ನೀಡಿ ಬಹಿರಂಗವಾಗಿ ಪ್ರೋತ್ಸಾಹಿಸುವ ಈ ಗೋಮುಖ ವ್ಯಾಘ್ರತನವನ್ನು ಎಲ್ಲಾ ಸಂಸ್ಕಾರವಂತ ಜನ ಪಕ್ಷಾತೀತವಾಗಿ ವಿರೋಧಿಸಬೇಕಿದೆ........

ಜೂಜು ತೊಲಗಲಿ – ಕ್ರೀಡೆ ಬೆಳೆಯಲಿ – ದೇಶ ಉಳಿಯಲಿ....ಎಂಬ ಅಭಿಯಾನ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಧಾನಿಯವರಿಗೆ ತಲುಪಿಸುವ ಕೆಲಸವನ್ನು ಎಲ್ಲರೂ ಮಾಡೋಣ.

ಈ ಜೂಜಿನ ಆದಾಯಕ್ಕೆ ಪರ್ಯಾಯವಾಗಿ ಮತ್ತೆ ಏನಾದರೂ ಶ್ರಮದಾಯಕ, ಪ್ರಾಮಾಣಿಕ ಮತ್ತು ಹಾನಿಕಾರಕವಲ್ಲದ ಸಂಸ್ಕಾರಯುತ ಮೂಲಗಳು ಸೃಷ್ಟಿಯಾಗಲಿ.....



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# ನನ್ನಿವಾಳ ನೂತನ ಗ್ರಾಪಂ ಕಟ್ಟಡ ಪೂರ್ಣಗೊಳಿಸಲು ಒತ್ತಾಯ

» **ಚಳ್ಳಕೆರೆ**

ತಾಲ್ಲೂಕಿನ ಹೆಚ್ಚು ಗ್ರಾಮಗಳನ್ನು ಹಾಗೂ ವಿಸ್ತಾರವನ್ನು ಹೊಂದಿರುವ ನನ್ನಿವಾಳ ಗ್ರಾಮ ಪಂಚಾಯಿತಿ ಕೇಂದ್ರಕ್ಕೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವುದಲ್ಲದೆ, ಕಳೆದ ಸುಮಾರು ಆರೇಳು ತಿಂಗಳಿನಿಂದ ನೆನೆಗುದಿಗೆ ಬಿದ್ದಿರುವ ಗ್ರಾಮ ಪಂಚಾಯಿತಿ ಕಟ್ಟಡ ಕಾಮಗಾರಿಯನ್ನು ಪೂರೈಸಬೇಕೆಂದು ಗ್ರಾಮದ ಹಿರಿಯ ಮುಖಂಡ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ದೊರೆಬೈಯಣ್ಣ ಸರ್ಕಾರವನ್ನು ಆಗ್ರಹಿಸಿದ್ಧಾರೆ. ಅವರು, ಮಂಗಳವಾರ ಗ್ರಾಮ ಪಂಚಾಯಿತಿ ಕೇಂದ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಕಳೆದ ವರ್ಷ ನೂತನ ಗ್ರಾಮ ಪಂಚಾಯಿತಿ ಕಟ್ಟಡಕ್ಕೆ 50 ಲಕ್ಷ ಹಣ ಮಂಜೂರಾಗಿದ್ದು ನಿರ್ಮಿತಿಕೇಂದ್ರ ಸದರಿ ಕಾಮಗಾರಿಯನ್ನು ಎತ್ತಿಕೊಂಡಿದ್ದು, ಈಗಾಗಲೇ 36 ಲಕ್ಷ ಹಣ ಬಿಡುಗಡೆಯಾದರೂ ಕಟ್ಟಡ ಕಾಮಗಾರಿ ಮಾತ್ರ ಆಮೇಗತಿಯಲ್ಲಿ ನಡೆಯುತ್ತಿದೆ. ಇದರಿಂದ ಗ್ರಾಮ ಪಂಚಾಯಿತಿ ಕಾರ್ಯಾಲಯ ಸುಸೂತ್ರವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಸರ್ಕಾರ ಈ ಬಗ್ಗೆ ಗಮನ ನೀಡಬೇಕೆಂದರಲ್ಲದೆ,ಗ್ರಾಮಪಂಚಾಯಿತಿ ಕಟ್ಟಡ ಆವರಣದಲ್ಲೇ ಗ್ರಾಮದ ಮುಖಂಡರೊಡನೆ ಸೇರಿ ಸಸಿ ನೆಡುವ ಮೂಲಕ ವಿಶ್ವಪರಿಸರ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ರಾಜಣ್ಣ, ಕೆಂಚಣ್ಣ, ಬೋರಯ್ಯ, ದಾದಾಪೀರ್, ಈಶ್ವರನಾಯಕ, ಪಾಪಣ್ಣ, ಶಿವಣ್ಣ, ರುದ್ರೇಶ್, ಪಿಡಿಒ ಇನಾಯಿತ್‌ಪಾಷ ಮುಂತಾದವರು ಉಪಸ್ಥಿತರಿದ್ದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T